# ಕರ್ನಾಟಕ ವಿಧಾನ ಪರಿಷತ್ತು

ಸಂಖ್ಯೆ:ಕವಿಪ/ಆ-1/52/ಸು/2024

ವಿಧಾನ ಪರಿಷತ್ತಿನ ಸಚಿವಾಲಯ,
ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನ ಸೌಧ,
ಡಾ: ಬಿ.ಆರ್. ಅಂಬೇಡ್ಕರ್ ವೀಧಿ,
ಬೆಂಗಳೂರು-560 001, ದಿನಾಂಕ:18.11.2025.

**<u>ಸುತ್ತೋಲೆ</u>**

ವಿಷಯ: ದಿನಾಂಕ:19.11.2025 ರಿಂದ 25.11.2025 ರವರೆಗೆ ರಾಜ್ಯಾದ್ಯಂತ ರಾಷ್ಟ್ರೀಯ ಐಕ್ಯತಾ ಸಪ್ತಾಹವನ್ನು ಆಚರಿಸುವ ಬಗ್ಗೆ.

ಉಲ್ಲೇಖ: ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ:8:ಪಿಹೆಚ್‌ಎಲ್:2025, ದಿನಾಂಕ:15.11.2025.

***

ಉಲ್ಲೇಖಿತ ಸುತ್ತೋಲೆ ಅನ್ವಯ ದಿನಾಂಕ:19.11.2025ರಿಂದ 25.11.2025ರವರೆಗೆ "ರಾಷ್ಟ್ರೀಯ ಐಕ್ಯತಾ ಸಪ್ತಾಹ"ವನ್ನು ರಾಜ್ಯಾದ್ಯಂತ ಆಚರಿಸಲು ನಿರ್ಧರಿಸಲಾಗಿದೆ.

ಆದುದರಿಂದ, **"ರಾಷ್ಟ್ರೀಯ ಐಕ್ಯತಾ ಸಪ್ತಾಹ" ಆಚರಣೆಯ ಸಂಬಂಧ ಪ್ರಮಾಣ ವಚನ ಸ್ವೀಕರಿಸಲು ದಿನಾಂಕ:19.11.2025ರಂದು ವಿಧಾನ ಸೌಧದ ಮೊದಲನೆ ಮಹಡಿಯಲ್ಲಿರುವ ಸೆಂಟ್ರಲ್ ಹಾಲ್‌ನಲ್ಲಿ ಬೆಳಗ್ಗೆ 11.00 ಗಂಟೆಗೆ** ಈ ಸಚಿವಾಲಯದ ಎಲ್ಲಾ ಅಧಿಕಾರಿ/ನೌಕರರುಗಳು ಭಾಗವಹಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ. (ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನಕ್ಕಾಗಿ ಪುಟ ತಿರುಗಿಸಿ ನೋಡಿ)

**(ಜ್ಯೋತಿ)**
ಉಪ ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಗೆ,

ವಿಧಾನ ಪರಿಷತ್ತಿನ ಎಲ್ಲಾ ಅಧಿಕಾರಿ/ನೌಕರರುಗಳಿಗೆ (ಶಾಸಕರ ಭವನವು ಸೇರಿದಂತೆ)

**<u>ಪ್ರತಿಗಳು:</u>**

1. ಮಾನ್ಯ ಸಭಾಪತಿಯವರ ಕಾರ್ಯದರ್ಶಿ/ ಆಪ್ತ ಕಾರ್ಯದರ್ಶಿಯವರಿಗೆ, ಕವಿಪ
2. ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರಿಗೆ, ಕವಿಪ.
3. ಕಾರ್ಯದರ್ಶಿ-2ರವರ ಆಪ್ತ ಸಹಾಯಕರಿಗೆ, ಕವಿಪ.
4. ಕರ್ನಾಟಕ ವಿಧಾನ ಪರಿಷತ್ತು ಹಾಗೂ ಶಾಸಕರ ಭವನದ ಸೂಚನಾ ಫಲಕಗಳಿಗೆ,ಕವಿಪ.
5. ರಕ್ಷಾ ಕಡತಕ್ಕೆ/ಸೂಚನಾ ಫಲಕಕ್ಕೆ/ಬಿಡಿ ಪ್ರತಿಗಳು.

# ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನ

"ರಾಷ್ಟ್ರದ ಸ್ವಾತಂತ್ರ್ಯ ಹಾಗೂ ಐಕ್ಯತೆಯನ್ನು ಸಂರಕ್ಷಿಸಲು ಮತ್ತು ಬಲಪಡಿಸಲು ಅರ್ಪಣಾ ಮನೋಭಾವದಿಂದ ಕೆಲಸ ಮಾಡುತ್ತೇನೆಂದು ನಾನು ಶ್ರದ್ಧಾಪೂರ್ವಕವಾಗಿ ಪ್ರಮಾಣ ಮಾಡುತ್ತೇನೆ."

"ಅಲ್ಲದೆ ನಾನು ಎಂದಿಗೂ ಹಿಂಸಾಚಾರದಲ್ಲಿ ತೊಡಗುವುದಿಲ್ಲವೆಂದು ಮತ್ತು ಮತ, ಭಾಷೆ, ಪ್ರದೇಶ ಅಥವಾ ಇತರ ರಾಜಕೀಯ ಅಥವಾ ಆರ್ಥಿಕ ಕುಂದು ಕೊರತೆಗಳ ಬಗೆಗಿನ ಭಿನ್ನಾಭಿಪ್ರಾಯಗಳನ್ನು ಮತ್ತು ವಿವಾದಗಳನ್ನು ಶಾಂತಿಯುತವಾಗಿ ಹಾಗೂ ಸಂವಿಧಾನಾತ್ಮಕ ರೀತಿಯಲ್ಲಿ ಬಗೆಹರಿಸಿಕೊಳ್ಳುವ ದಿಸೆಯಲ್ಲಿ ನನ್ನ ಪ್ರಯತ್ನವನ್ನು ಮುಂದುವರೆಸುತ್ತೇನೆಂದೂ ಪ್ರಮಾಣ ಮಾಡುತ್ತೇನೆ."